ಹಾವೇರಿ-ಗದಗ್ ಜಿಲ್ಲೆಗಳಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಸ್ಥಾಪನೆ.

914 (127) ಶ್ರೀ ಕೋಳಿವಾಡ ಕೃಷ್ಣಪ್ಪ ಭೀಮಪ್ಪ (ರಾಣಿ ಬೆನ್ನೂರು) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಧಾರವಾಡ ಜಿಲ್ಲೆ ಪುನರ್ ನಿರ್ಮಿತಗೊಂಡು ಧಾರವಾಡ, ಹಾವೇರಿ, ಗದಗ್ ಜಿಲ್ಲೆಗಳಾಗಿ ಪರಿವರ್ತನೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? 3 ಜಿಲ್ಲೆಗಳಿಗೂ ಕೂಡಿಸಿ ಒಂದು ಕರ್ನಾಟಕ ಸೆಂಟ್ರಲ್ ಕೋ-ಆಪರೇಟೀವ್ ಬ್ಯಾಂಕ್ ಇರುವುದು ನಿಜವಲ್ಲವೆ ಇದನ್ನು ವಿಭಜನೆಗೊಳಿಸಿ ಹಾವೇರಿ, ಗದಗ ಜಿಲ್ಲೆಗಳಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಆಗಿ ಪರಿವರ್ತಿಸುವ ವಿಚಾರ ಸರ್ಕಾರದ ಮುಂದಿದೆಯೇ?

2) ಈ ದಿಸೆಯಲ್ಲಿ ಸರ್ಕಾರವು ಕೈಗೊಂಡ ಕ್ರಮ ಏನು?

3) ಎಷ್ಟು ದಿವಸಗಳಲ್ಲಿ ಜಿಲ್ಲೆಗೊಂದು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕನ್ನು ಪ್ರಾರಂಭಿಸಲಾಗುವುದು?

ಶ್ರೀ ಡಿ.ಕೆ. ಶಿವಕುಮಾರ್ (ಸಹಕಾರ ಸಚಿವರು) :

1) ಹೌದು

2) ಧಾರವಾಡ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕನ್ನು ವಿಭಜಿಸಿ ಗದಗ್ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳನ್ನು ಸ್ಥಾಪಿಸುವ ಬಗ್ಗೆ ಅನುಮತಿ ಕೋರಿ ಪ್ರಸ್ತಾವನೆಯನ್ನು ನಬಾರ್ಡ್ ಮೂಲಕ ಆರ್. ಬಿ. ಐ. ಗೆ ಕಳುಹಿಸಲಾಗಿತ್ತು. ಆದರೆ ದಿನಾಂಕ 7-4-2000ನ ಪತ್ರದಲ್ಲಿ ಕರ್ನಾಟಕ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನ, ಧಾರವಾಡ ಇದರ ಪರಿಸ್ಥಿತಿ ಸುಧಾರಣೆಯಾದ ಮೇಲೆ ಪ್ರಸ್ತಾವನೆ ಸಲ್ಲಿಸುವಂತೆ ನಬಾರ್ಡ್ ತಿಳಿಸಿರುತ್ತದೆ. ಸಲಾ ವಸೂಲಾತಿ ಹಿನ್ನಡೆಯಾಗಿದ್ದು, ಉತ್ತಮ ಪಡಿಸುವಂತೆ ಬ್ಯಾಂಕಿಗೆ ಸೂಚನೆ ನೀಡಲಾಗಿದೆ.

3) ಭಾರತೀಯ ರಿಜರ್ವ್ ಬ್ಯಾಂಕಿನಿಂದ ಅನುಮತಿ ಅಗತ್ಯ ವಿರುವುದರಿಂದ ಹಾಗೂ ಸಹಕಾರ ಸಂಘಗಳ ಕಾಯ್ದೆ ಕಲಂ 14 ರ ಪ್ರಕಾರ ಹಾಲಿ ಇರುವ ಬ್ಯಾಂಕನ್ನು ವಿಭಾಜಿಸಿ ಹೊಸ ಜಿಲ್ಲಾ ಬ್ಯಾಂಕನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಬೇಕಾಗಿರುವುದರಿಂದ ಹೊಸ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕನ್ನು ಎಷ್ಟು ದಿವಸಗಳಲ್ಲಿ ಸ್ಥಾಪಿಸಲಾಗುವುದು ಎಂಬ ಬಗ್ಗೆ ನಿರ್ದಿಷ್ಟವಾಗಿ ಹೇಳಲು ಸಾಧ್ಯವಿರುವುದಿಲ್ಲ.

ರಾಣಿಬೆನ್ನೂರು ನಗರದ ಬಸ್ ನಿಲ್ದಾಣವನ್ನು ನವೀಕರಿಸುವುದು

915 (1271) ಶ್ರೀ ಕೋಳಿವಾಡ ಕೃಷ್ಣಪ್ಪ ಭೀಮಪ್ಪ (ರಾಣಿಬೆನ್ನೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಣಿಬೆನ್ನೂರು ನಗರದಲ್ಲಿರುವ ಬಸ್ ನಿಲ್ದಾಣವನ್ನು ನವೀಕರಿಸುವ ವಿಚಾರವು ಯಾವ ಹಂತದಲ್ಲಿದೆ;

ಆ) ವಿಳಂಬಕ್ಕೆ ಕಾರಣಗಳೇನು?